# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 28(142) |
| ಮಾನ್ಯ ಸದಸ್ಯರ ಹೆಸರು: | ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು: | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |
| ಉತ್ತರಿಸಬೇಕಾದ ದಿನಾಂಕ: | 15.07.2024. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿರುವ ಸರ್ಕಾರಿ ಶಾಲೆಗಳಲ್ಲಿ ಅಗತ್ಯವಾಗಿ ಬೇಕಾಗಿರುವ ಕೊಠಡಿ, ಪೀಠೋಪಕರಣಗಳು ಹಾಗೂ ಶಿಕ್ಷಕರ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ತೆಗೆದುಕೊಂಡ ಕ್ರಮವೇನು: | ಬಂದಿದೆ. |

ಶಾಲೆಗಳಲ್ಲಿ ಅಗತ್ಯವಾಗಿ ಬೇಕಾಗಿರುವ ಕೊಠಡಿ, ಪೀಠೋಪಕರಣಗಳನ್ನು ಒದಗಿಸುವ ಸಂಬಂಧ ಕಳೆದ ಸಾಲುಗಳಲ್ಲಿ ಈ ಕೆಳಕಂಡಂತೆ ಕ್ರಮಕೈಗೊಳ್ಳಲಾಗಿದೆ:-

**ಕೊಠಡಿಗಳ ನಿರ್ಮಾಣ:-**

ಅನುದಾನ ಲಕ್ಷಗಳಲ್ಲಿ

| ಕ್ರ. ಸಂ | ವರ್ಷ | ಯೋಜನೆ | ಮಂಜೂರಾದ ಕಾಮಗಾರಿಗಳ ಸಂಖ್ಯೆ | ಮಂಜೂರಾದ ಅನುದಾನ | ಬಿಡುಗಡೆ ಮಾಡಲಾದ ಅನುದಾನ |
|---|---|---|---|---|---|
| 1. | 2021-22 | ಕೋವಿಡ್ ಕಾರಣದಿಂದಾಗಿ ಕೊಠಡಿ ನಿರ್ಮಾಣಕ್ಕೆ ಅನುದಾನ ಬಿಡುಗಡೆಯಾಗಿರುವುದಿಲ್ಲ. | | | |
| 2. | 2022-23 | ವಿವೇಕ | 6601 | 94393.9 | 46901.84 |
| 3. | 2023-24 | ವಿವೇಕ | | | 16960.61 |
| 4. | 2022-23 | ಮುಖ್ಯಮಂತ್ರಿಗಳ ವಿಶೇಷ ಅನುದಾನ | 710 | 8808 | 4301.26 |
| ಒಟ್ಟು | | | **7311** | **103201.9** | **68163.71** |

2024-25ನೇ ಸಾಲಿಗೆ ಸರ್ಕಾರಿ ಶಾಲಾ ಕೊಠಡಿಗಳ ನಿರ್ಮಾಣ ಕಾಮಗಾರಿಗಳಿಗೆ ಮುಂದುವರೆದ ಯೋಜನೆಗೆ ರೂ. 23039.49 ಲಕ್ಷಗಳು ಮತ್ತು ಹೊಸ ಯೋಜನೆಗೆ ರೂ. 11546.41 ಲಕ್ಷಗಳು ಸೇರಿ ಒಟ್ಟು ರೂ. 34585.9 ಲಕ್ಷಗಳು ನಿಗದಿಯಾಗಿದ್ದು, ರಾಜ್ಯದ ಎಲ್ಲಾ ಜಿಲ್ಲೆಗಳಿಂದ ಕ್ರಿಯಾ ಯೋಜನೆಯನ್ನು ಪಡೆಯಲಾಗಿರುತ್ತದೆ.

**ಕೊಠಡಿಗಳ ದುರಸ್ತಿ:-**

ಅನುದಾನ ಲಕ್ಷಗಳಲ್ಲಿ

| ಕ್ರ.ಸಂ | ವರ್ಷ | ಶಾಲೆಗಳ ಸಂಖ್ಯೆ | ಮಂಜೂರಾದ ಅನುದಾನ | ಬಿಡುಗಡೆಯಾದ ಅನುದಾನ |
|---|---|---|---|---|
| 1. | 2021-22 | 518 | 1947 | 1947 |
| 2. | 2022-23 | 1833 | 4650 | 4650 |
| 3. | 2023-24 | 2162 | 7000 | 7000 |
| | **ಒಟ್ಟು** | **4513** | **13597** | **13597** |

2024-25ನೇ ಸಾಲಿಗೆ ಸರ್ಕಾರಿ ಶಾಲಾ ಕೊಠಡಿಗಳ ದುರಸ್ತಿ ಕಾಮಗಾರಿಗಳಿಗೆ ಮುಂದುವರೆದ ಯೋಜನೆಗೆ ರೂ. 5129.66 ಲಕ್ಷಗಳು ಹಾಗೂ ಹೊಸ ಯೋಜನೆಗೆ ರೂ.10000.00 ಲಕ್ಷಗಳು ನಿಗದಿಯಾಗಿದ್ದು, ರಾಜ್ಯದ ಎಲ್ಲಾ ಜಿಲ್ಲೆಗಳಿಂದ ಕ್ರಿಯಾಯೋಜನೆಯನ್ನು ಪಡೆಯಲು ಕ್ರಮವಹಿಸಲಾಗುತ್ತಿದೆ.

| | | |
|---|---|---|
| | | **ಪೀಠೋಪಕರಣ ಖರೀದಿ:-**<br><br>2021-22 ಮತ್ತು 2022-23ನೇ ಸಾಲಿಗೆ ರಾಜ್ಯದ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ಅಗತ್ಯತೆಗನುಗುಣವಾಗಿ ಪೀಠೋಪಕರಣ ಒದಗಿಸಲು ರೂ. 70.00 ಕೋಟಿ ಅನುದಾನ ಮಂಜೂರಾಗಿ, ಜಿಲ್ಲೆಗಳಿಗೆ ಬಿಡುಗಡೆಗೊಳಿಸಲಾಗಿದೆ ಹಾಗೂ ಖರೀದಿ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ.<br><br>**ಸರ್ಕಾರಿ ಪ್ರಾಥಮಿಕ ಶಾಲೆಗಳು :**<br>ರಾಜ್ಯದಲ್ಲಿನ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳ ಎದುರಾಗಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಪ್ರತಿ ವರ್ಷದಂತೆ ಪ್ರಸ್ತುತ ಸಾಲಿನಲ್ಲಿಯೂ ಶೈಕ್ಷಣಿಕ ವರ್ಷದ ಅಂತ್ಯದವರೆಗೆ ತಾತ್ಕಾಲಿಕವಾಗಿ 33863 ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಂಡು ಶಿಕ್ಷಕರ ಕೊರತೆಯನ್ನು ನೀಗಿಸಲು ಕ್ರಮವಹಿಸಿದೆ.<br><br>ಮುಂದುವರೆದು, ರಾಜ್ಯದಲ್ಲಿ ಖಾಲಿ ಇರುವ ಪ್ರಾಥಮಿಕ ಶಾಲಾ ಶಿಕ್ಷಕರ ಒಟ್ಟು 7500 ಹುದ್ದೆಗಳನ್ನು ನೇಮಕಾತಿ ಮಾಡಿಕೊಳ್ಳುವ ಸಂಬಂಧ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಗೆ ಸಲ್ಲಿಸಲಾಗಿರುತ್ತದೆ.<br><br>**ಸರ್ಕಾರಿ ಪ್ರೌಢಶಾಲೆಗಳು:**<br>ರಾಜ್ಯದಲ್ಲಿನ ಸರ್ಕಾರಿ ಪ್ರೌಢಶಾಲೆಗಳಲ್ಲಿ ಒಟ್ಟು 10879 ಶಿಕ್ಷಕರ ಹುದ್ದೆಗಳು ಖಾಲಿ ಇರುತ್ತವೆ.<br><br>ಇವುಗಳಲ್ಲಿ ಒಟ್ಟು 2500 ಹುದ್ದೆಗಳನ್ನು ನೇಮಕಾತಿ ಮಾಡಿಕೊಳ್ಳುವ ಸಂಬಂಧ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಗೆ ಸಲ್ಲಿಸಲಾಗಿರುತ್ತದೆ.<br><br>**ಶಿಕ್ಷಕರ ಕೊರತೆ :-**<br>2024-25ನೇ ಸಾಲಿನಲ್ಲಿ ರಾಜ್ಯದ ಸರ್ಕಾರಿ ಪ್ರೌಢಶಾಲೆಗಳಲ್ಲಿ ಖಾಲಿ ಇರುವ ವಿಷಯ ಶಿಕ್ಷಕರ ಹುದ್ದೆಗಳಿಗೆ ಎದುರಾಗಿ ತಾತ್ಕಾಲಿಕವಾಗಿ ಒಟ್ಟು 8954 ಅತಿಥಿ ಶಿಕ್ಷಕರುಗಳನ್ನು ನೇಮಕ ಮಾಡಿ ಹಂಚಿಕೆ ಮಾಡಲಾಗಿದ್ದು, ಶಿಕ್ಷಕರ ಕೊರತೆ ನೀಗಿಸಲು ಕ್ರಮವಹಿಸಲಾಗಿದೆ. |
| ಆ) | ರಾಜ್ಯದಲ್ಲಿರುವ ಒಟ್ಟು ಸರ್ಕಾರಿ ಶಾಲೆಗಳ ಸಂಖ್ಯೆಯೆಷ್ಟು: ಇದರಲ್ಲಿ 10 ಕ್ಕಿಂತ ಕಡಿಮೆ ಮಕ್ಕಳಿರುವ ಸರಾಸರಿ ಶಾಲೆಗಳ ಸಂಖ್ಯೆಯೆಷ್ಟು: ಇರುವ ಶಾಲೆಗಳಲ್ಲಿ ಏಕೋಪಾಧ್ಯಾಯ ಸರ್ಕಾರಿ ಶಾಲೆಗಳ ಸಂಖ್ಯೆಯೆಷ್ಟು: | ರಾಜ್ಯದಲ್ಲಿ ಒಟ್ಟು 41905 ಸರ್ಕಾರಿ ಪ್ರಾಥಮಿಕ ಶಾಲೆಗಳಿದ್ದು, ಇದರಲ್ಲಿ 10ಕ್ಕಿಂತ ಕಡಿಮೆ ಮಕ್ಕಳಿರುವ ಶಾಲೆಗಳ ಸಂಖ್ಯೆ: 4398 ಮತ್ತು ಏಕೋಪಾಧ್ಯಾಯ ಸರ್ಕಾರಿ ಶಾಲೆಗಳ ಸಂಖ್ಯೆ 6360 ಆಗಿರುತ್ತದೆ.<br><br>ರಾಜ್ಯದಲ್ಲಿ ಒಟ್ಟು 4850 ಸರ್ಕಾರಿ ಪ್ರೌಢ ಶಾಲೆಗಳು ಇದ್ದು, ಇವುಗಳಲ್ಲಿ 10ಕ್ಕಿಂತ ಕಡಿಮೆ ಮಕ್ಕಳಿರುವ ಶಾಲೆಗಳು ಹಾಗೂ ಏಕೋಪಾಧ್ಯಾಯ ಶಾಲೆಗಳು ಯಾವುವೂ ಇರುವುದಿಲ್ಲ. |
| ಇ) | ಪ್ರತಿ ವರ್ಷವೂ ಸರ್ಕಾರಿ ಶಾಲೆಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆ | ಇಲ್ಲ<br><br>ಕಳೆದ 5 ವರ್ಷಗಳಿಂದ ಯಾವುದೇ ಸರ್ಕಾರಿ ಶಾಲೆಗಳನ್ನು |

| | | |
|---|---|---|
| | ಕ್ಷೀಣಿಸುತ್ತಿರುವುದರಿಂದ, ಸರ್ಕಾರಿ ಶಾಲೆಗಳನ್ನು ಮುಚ್ಚುವ ಪರಿಸ್ಥಿತಿ ಎದುರಾಗಿದೆಯೇ: ಹಾಗಿದ್ದಲ್ಲಿ. ಕಳೆದ ಐದು ವರ್ಷಗಳಿಂದ ಎಷ್ಟು ಸರ್ಕಾರಿ ಶಾಲೆಗಳನ್ನು ಮುಚ್ಚಲಾಗಿದೆ: | ಮುಚ್ಚಿರುವುದಿಲ್ಲ. ಮಕ್ಕಳ ಸಂಖ್ಯೆ ಶೂನ್ಯವಾದಲ್ಲಿ ಮಾತ್ರ ತಾತ್ಕಾಲಿಕವಾಗಿ ಶಾಲೆಯನ್ನು ಸ್ಥಗಿತಗೊಳಿಸಲಾಗುತ್ತದೆ. ಭವಿಷ್ಯದಲ್ಲಿ ಮಕ್ಕಳು ದಾಖಲಾದಲ್ಲಿ ಪುನಃ ಶಾಲೆಯನ್ನು ಪುನರಾರಂಭಿಸಲಾಗುವುದು. |
| ಈ) | ಕಳೆದ ಐದು ವರ್ಷದಲ್ಲಿ ಎಷ್ಟು ಖಾಸಗಿ ಶಾಲೆಗಳ ಪ್ರಾರಂಭಕ್ಕೆ ಅನುಮತಿ ನೀಡಲಾಗಿದೆ: ಅದೇ ರೀತಿ ಎಷ್ಟು ಖಾಸಗಿ ಶಾಲೆಗಳನ್ನು ಮುಚ್ಚಲಾಗಿದೆ: (ವಿವರ ನೀಡುವುದು) | ಕಳೆದ 5 ವರ್ಷಗಳಲ್ಲಿ ಒಟ್ಟು 2905 ಖಾಸಗಿ ಶಾಲೆಗಳ ಪ್ರಾರಂಭಕ್ಕೆ ಅನುಮತಿ ನೀಡಲಾಗಿದ್ದು, ಈ ಅವಧಿಯಲ್ಲಿ ಒಟ್ಟು 762 ಖಾಸಗಿ ಶಾಲೆಗಳನ್ನು ಮುಚ್ಚಲಾಗಿರುತ್ತದೆ. ಜಿಲ್ಲಾವಾರು ಮಾಹಿತಿಯನ್ನು ಅನುಬಂಧದಲ್ಲಿರಿಸಿದೆ. |
| ಉ) | ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ದಾಖಲಾತಿ ಕಡಿಮೆ ಆಗಲು ಕಾರಣ ಏನೆಂಬುದನ್ನು ಕಂಡು ಹಿಡಿಯಲು ಯಾವುದಾದರೂ ಸಮಿತಿಯನ್ನು ರಚಿಸಲಾಗಿದೆಯೇ:? (ವಿವರಗಳನ್ನು ಒದಗಿಸುವುದು) | ಇಲ್ಲ |

**ಇಪಿ 35 ಪಿಎಂಎ 2024**

**(ಎಸ್. ಮಧು ಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು